ಶ್ರೀಮತಿ. ಭಾಗೀರಥಿ ಮರುಳಸಿದ್ದನಗೌಡ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರು):

ಅ) ರಾಜ್ಯದಲ್ಲಿ ಸ್ತ್ರೀಶಕ್ತಿ ಗುಂಪಿನ ಸದಸ್ಯರು ಸಭೆ ಸಮಾರಂಭ ನಡೆಸಲು ಅನುಕೂಲವಾಗುವಂತೆ ಸ್ತ್ರೀಶಕ್ತಿ ಗುಂಪುಗಳಿಗೆ ಸಮುದಾಯ ಭವನವನ್ನು ಹೋಬಳಿ ಹಂತದಲ್ಲಿ ನಿರ್ಮಿಸಲು ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಆ) ಪ್ರಸ್ತಾವನೆಯನ್ನು ಸಂಪೂರ್ಣವಾಗಿ ಪರಿಶೀಲಿಸಿ ಆಯವ್ಯಯ ಒದಗಿಸಿಕೊಂಡ ನಂತರ ಕ್ರಮ ಕೈಗೊಳ್ಳಲಾಗುವುದು.

1458(1722) ಶ್ರೀ ನಿಂಗಪ್ಪ.ಹೆಚ್(ಕುಣಿಗಲ್) ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯಲ್ಲಿ ಅರ್ಹರಿಗೆ ಹಳದಿ ಪಡಿತರ ಚೀಟಿ ನೀಡಲು ಸಮೀಕ್ಷೆ ಕಾರ್ಯ ನಡೆಯುತ್ತಿರುವುದು ನಿಜವೇ?

ಆ) ಹಾಗಿದ್ದಲ್ಲಿ ಯಾವಾಗ ಮುಗಿಯುತ್ತದೆ.

ಇ) ಸಮೀಕ್ಷಾ ಕಾರ್ಯವನ್ನು ತ್ವರಿತವಾಗಿ ಮುಗಿಸಿ ಬಡವರಿಗೆ ಹಳದಿ ಕಾರ್ಡ್ ವಿತರಿಸಲು ಸರ್ಕಾರಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್. ಎಸ್. ಮಹದೇವ ಪ್ರಸಾದ್: (ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು):

ಅ) ಹೌದು.

ಆ) ಸರ್ಕಾರಿ ಆದೇಶ ಸಂಖ್ಯೆ:ಆನಾಸ 114 ಡಿಆರ್ಎ 2004 ದಿನಾಂಕ: 10.1.2005ರನ್ವಯ ಜನವರಿ 2005ರ ಮಾಹೆಯಿಂದ ಮನೆ-ಮನೆ ಪುನರ್ ಸಮೀಕ್ಷಾ ಕಾರ್ಯವು ಪ್ರಾರಂಭವಾಗಿದ್ದು, ಏಪ್ರಿಲ್ 2005ರಲ್ಲಿ ಸಂಪೂರ್ಣವಾಗಲಿದೆ. ನಂತರ ಅರ್ಹ ಫಲಾನುಭವಿಗಳ ಪಟ್ಟಿಯನ್ನು ಗ್ರಾಮಸಭಾ ಹಾಗೂ ವಾರ್ಡ್‌ಸಭೆಗಳ ಮುಂದೆ ಮಂಡಿಸಿ, ಅನುಮೋದನೆ ಪಡೆದ ಬಳಿಕ ಅರ್ಹ ಫಲಾನುಭವಿಗಳಿಗೆ ಹಳದಿ ಪಡಿತರ ಚೀಟಿಗಳನ್ನು ವಿತರಿಸಲಾಗುವುದು.

ಇ) ಸಮೀಕ್ಷಾ ಪಟ್ಟಿಗಳನ್ನು ಗ್ರಾಮ ಸಭಾ ಹಾಗೂ ವಾರ್ಡ್ ಸಭಾಗಳಲ್ಲಿ ಅನುಮೋದನೆ ಪಡೆದನಂತರ ಎಲ್ಲಾ ಅರ್ಹ ಕುಟುಂಬಗಳಿಗೆ ಪಡಿತರ ಚೀಟಿಗಳನ್ನು ವಿತರಿಸಲಾಗುವುದು.

1459(1723) ಶ್ರೀ ನಿಂಗಪ್ಪ ಹೆಚ್.(ಕುಣಿಗಲ್) ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ವಿದ್ಯುಚ್ಛಕ್ತಿ ಅಭಾವ ಮತ್ತು ಅಂತರ್ಜಲ ಕುಸಿತಗಳಿಂದ ನೀರಿಲ್ಲದೆ ಹಾಳಾಗುತ್ತಿರುವ ತೋಟಗಾರಿಕೆ ಬೆಳೆಗಳನ್ನು ರಕ್ಷಿಸಲು ಹನಿನೀರಾವರಿಯನ್ನು ಕಡ್ಡಾಯಗೊಳಿಸಲು ಸರ್ಕಾರ ಗಮನಹರಿಸುವುದೆ;

ಆ) ಹಾಗಿದ್ದಲ್ಲಿ, ಹನಿ ನೀರಾವರಿ ಕಡ್ಡಾಯಗೊಳಿಸುವ ಸಂದರ್ಭದಲ್ಲಿ ಹಾಲಿ ನೀಡಲಾಗುತ್ತಿರುವ ಸಬ್ಸಿಡಿಯನ್ನು ಶೇಕಡ ನೂರಕ್ಕೆ ಹೆಚ್ಚಿಸಿ ಬಡರೈತರಿಗೆ ಅನುಕೂಲ ಕಲ್ಪಿಸಲು ಸರ್ಕಾರ ಕ್ರಮಕ್ಕೈಗೊಳ್ಳುವುದೆ;